ಬಿ.ಪಿ.ಎಲ್. ಕಾರ್ಡುಗಳು

981 (1441) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ) : ಮಾನ್ಯ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು):

ಅ) ಭಾಲ್ಕಿ ವಿಧಾನಸಭಾ ಕ್ಷೇತ್ರದಲ್ಲಿ ಪ್ರತಿವರ್ಷ ನೀಡಲಾದ ಬಿಪಿಎಲ್ ಪಡಿತರ ಚೀಟಿಗಳ ಸಂಖ್ಯೆ ಎಷ್ಟು;

(ಕಳೆದ ಮೂರು ವರ್ಷಗಳ ವಿವರ ನೀಡುವುದು);

ಆ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ಎಷ್ಟು ಪಡಿತರ ಚೀಟಿಯನ್ನು ನೀಡುವ ಗುರಿಯನ್ನು ಹೊಂದಲಾಗಿತ್ತು;

ಇ) ಈ ಗುರಿಯನ್ನು ಸಾಧಿಸಲಾಗಿದೆಯೇ;

ಈ) ಇಲ್ಲದಿದ್ದಲ್ಲಿ, ಕಾರಣಗಳೇನು; ಪ್ರಸಕ್ತ ವರ್ಷ ಇಲ್ಲಿಯವರೆವಿಗೆ ಇದಕ್ಕಾಗಿ ಎಷ್ಟು ಅರ್ಜಿಗಳು ಬಂದಿವೆ;

ಉ) ಈ ಕ್ಷೇತ್ರದಲ್ಲಿ ಬಡತನ ರೇಖೆಗಿಂತ ಕೆಳಗಿನ ಜನರನ್ನು ಗುರುತಿಸಿ, ಅವರುಗಳಿಗೆ ಸಕಾಲದಲ್ಲಿ ಬಿಪಿಎಲ್ ಪಡಿತರ ಚೀಟಿಗಳನ್ನು ನೀಡಲು ಸರ್ಕಾರದ ಕ್ರಮಗಳೇನು?

ಶ್ರೀ ಹೆಚ್.ಹಾಲಪ್ಪ (ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು) :

ಅ) ಈ ಕೆಳಗಿನಂತೆ ಬಿಪಿಎಲ್ ಪಡಿತರ ಚೀಟಿಗಳನ್ನು ನೀಡಲಾಗಿದೆ.

(2006 ರಿಂದ 2009 ರ ವರೆಗೆ)

ವರ್ಷ	ಅಂತ್ಯೋದಯ	ಬಿಪಿಎಲ್	ಒಟ್ಟು
2006	8,082	23,073	31,155
2007	0	0	0
2008	0	3,563	3,563
2009	0	19,912	19,912

ಆ) ಯಾವುದೇ ಗುರಿಯನ್ನು ನೀಡಲಾಗಿರುವುದಿಲ್ಲ.

ಇ) ಅನ್ವಯಿಸುವುದಿಲ್ಲ.

ಈ) ಅನ್ವಯಿಸುವುದಿಲ್ಲ.

ಆದರೂ ಸಹ ರದ್ದುಪಡಿಸಿದ ಬಿಪಿಎಲ್ ಕಾರ್ಡುದಾರರು ಹಾಗೂ ಬಿಪಿಎಲ್‌ನಿಂದ ಎಪಿಎಲ್‌ಗೆ ಮಾರ್ಪಡಿಸಿದ ಕಾರ್ಡುದಾರರು ಭಾಲ್ಕಿ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 2,464 ಅರ್ಜಿಗಳನ್ನು ಸಲ್ಲಿಸಿ ಮತ್ತೆ ಬಿಪಿಎಲ್ ಕಾರ್ಡು ವಿತರಿಸಲು ಕೋರಿರುತ್ತಾರೆ.

ಉ) ಭಾಲ್ಕಿ ವಿಧಾನ ಸಭಾ ಕ್ಷೇತ್ರದಲ್ಲಿ ಬಂದ ಅರ್ಜಿಗಳನ್ನು ಪುನರ್ ಪರಿಶೀಲನೆಗಾಗಿ ಗ್ರಾಮ ಲೆಕ್ಕಧಿಕಾರಿಗಳಿಗೆ ನೀಡಲಾಗಿರುತ್ತದೆ. ಪರಿಶೀಲನೆ ಕಾರ್ಯ ಪ್ರಗತಿಯಲ್ಲಿರುತ್ತದೆ.

ಕಬ್ಬನ್ ಉದ್ಯಾನವನದ ಅಭಿವೃದ್ಧಿ

982 (1520) ಶ್ರೀ ಹ್ಯಾರೀಸ್ ಎನ್. ಎ. (ಶಾಂತಿನಗರ) : ಮಾನ್ಯ ತೋಟಗಾರಿಕೆ ಮತ್ತು ಬಂಧಿಖಾನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರಿನ ಸುಪ್ರಸಿದ್ಧ ಕಬ್ಬನ್ ಉದ್ಯಾನವನವನ್ನು ಅಭಿವೃದ್ಧಿ ಪಡಿಸುವಲ್ಲಿ ಸರ್ಕಾರ ಹಮ್ಮಿಕೊಂಡಿರುವ ಯೋಜನೆಗಳೇನು (ಕಳೆದ ಎರಡು ವರ್ಷಗಳಲ್ಲಿ ನಡೆದ ಅಭಿವೃದ್ಧಿ ವಿವರ ನೀಡುವುದು);

ಆ) ಕಬ್ಬನ್ ಉದ್ಯಾನವನದಲ್ಲಿರುವ ಮರಗಳ ಸಂಖ್ಯೆಯು ಕಡಿಮೆ ಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಮರಗಳ ಸಂರಕ್ಷಣೆ ಮತ್ತು ಉದ್ಯಾನವನದಲ್ಲಿರುವ ಸೂಕ್ತ ಮೂಲಭೂತ ಸೌಕರ್ಯಗಳನ್ನು ವ್ಯವಸ್ಥೆಗೊಳಿಸಲು ಹಮ್ಮಿಕೊಂಡ ಕ್ರಮಗಳೇನು;

ಇ) ಕಬ್ಬನ್ ಉದ್ಯಾನವನಕ್ಕೆ ಸರ್ಕಾರ ಕಳೆದ ಎರಡು ವರ್ಷಗಳಲ್ಲಿ ನೀಡಿರುವ ಅನುದಾನದ ವಿವರಗಳೇನು;

ಈ) ಉದ್ಯಾನವನವನ್ನು ಉತ್ತಮ ವ್ಯವಸ್ಥೆಯಲ್ಲಿರುವಂತೆ ಮಾಡಲು ಇಲಾಖೆಯ ಯೋಜನೆಗಳೇನು;

ಶ್ರೀ ಉಮೇಶ್ ವಿ. ಕತ್ತಿ (ತೋಟಗಾರಿಕೆ ಮತ್ತು ಬಂಧಿಖಾನೆ ಸಚಿವರು) :

ಅ) ಕಬ್ಬನ್ ಉದ್ಯಾನವನವನ್ನು ಅಭಿವೃದ್ಧಿಪಡಿಸುವಲ್ಲಿ ಹಮ್ಮಿಕೊಂಡಿರುವ ಯೋಜನೆಗಳು ಮತ್ತು ಕಳೆದ ಎರಡು ವರ್ಷಗಳಲ್ಲಿ (2007–08 ಮತ್ತು 2008–09) ನಡೆದ ಅಭಿವೃದ್ಧಿ ವಿವರ ಇಂತಿದೆ.